AUGUST 13, 2024

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಸಾಕ್ಷರತೆ ಪ್ರಮಾಣ ಹೆಚ್ಚಿಸಲು ರಾಜ್ಯಪಾಲ ಥಾವರ್ ಚಂದ ಗೆಹ್ಲೋಟ್ ಕರೆ.
- ನಾಡಹಬ್ಬ ದಸರಾ ಮಹೋತ್ಸವಕ್ಕೆ ಅಗತ್ಯ ಹಣ ಬಿಡುಗಡೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಮಾನವ–ಆನೆ ಸಂಘರ್ಷ ತಪ್ಪಿಸಲು ಸರ್ಕಾರದೊಂದಿಗೆ ಸಾರ್ವಜನಿಕರ ಸಹಕಾರ ಅಗತ್ಯ – ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.
- ಮೈಸೂರು, ಧಾರವಾಡ ಸೇರಿದಂತೆ ವಿವಿಧ ರಂಗಾಯಣಗಳಿಗೆ ನಿರ್ದೇಶಕರ ನೇಮಕ.

ಈಗ ವಾರ್ತೆಗಳ ವಿವರ

ಭಾರತ ಸ್ವಾತಂತ್ರ್ಯ ಪಡೆದು 2047 ಕ್ಕೆ ಶತಮಾನೋತ್ಸವ ಆಚರಿಸಲಿದ್ದು, ಈ ಹೊತ್ತಿಗೆ ದೇಶದ ಸಾಕ್ಷರತೆ ಪ್ರಮಾಣವನ್ನು ಶೇಕಡ 100 ಕ್ಕೆ ಹೆಚ್ಚಿಸಬೇಕಿದೆ ಎಂದು ರಾಜ್ಯಪಾಲ ಥಾವರ್ ಚಂದ ಗೆಹ್ಲೋಟ್ ಕರೆ ನೀಡಿದ್ದಾರೆ. ಗುಲಬರ್ಗಾ ವಿಶ್ವವಿದ್ಯಾಲಯದ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಜರುಗಿದ ವಿಶ್ವ ವಿದ್ಯಾಲಯದ 42ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರಸ್ತುತ ದೇಶದಲ್ಲಿ ಪುರುಷರು ಶೇ. 75ರಷ್ಟು ಸಾಕ್ಷರತೆ ಹೊಂದಿದ್ದು, ಮಹಿಳೆಯರಲ್ಲಿ ಇದರ ಪ್ರಮಾಣ ಇನ್ನೂ ಕಡಿಮೆ ಇದೆ. ಶಿಕ್ಷಣದಿಂದ ಮಾತ್ರ ಯಶಸ್ಸು ಸಾಧ್ಯ. ಹೀಗಾಗಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಿದೆ ಎಂದರು. ಉನ್ನತ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಎಂ.ಸಿ.ಸುಧಾಕರ್ ಮಾತನಾಡಿ, ಗುಲಬರ್ಗಾ ವಿಶ್ವವಿದ್ಯಾಲಯ ಸೇರಿದಂತೆ ರಾಜ್ಯದ ವಿಶ್ವವಿದ್ಯಾಲಯದಲ್ಲಿನ ಖಾಲಿ ಇರುವ ಬೋಧಕ, ಬೋಧಕೇತರ ಹುದ್ದೆಗಳ ಭರ್ತಿಗೆ ಈಗಾಗಲೇ ರಾಜ್ಯಪಾಲರು ಅನುಮೋದನೆ ನೀಡಿದ ಹಿನ್ನೆಲೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹ ಒಪ್ಪಿಗೆ ಸೂಚಿಸಿದ್ದಾರೆ. ವಿಶ್ವವಿದ್ಯಾಲಯದ ಕುಲಪತಿಯವರು ಕೂಡಲೇ ಪ್ರಸ್ತಾವ ಸಲ್ಲಿಸುವಂತೆ ತಿಳಿಸಿದರು.

*******

ಆರೋಗ್ಯವಂತ ಪ್ರತಿಯೊಬ್ಬ ವ್ಯಕ್ತಿ ರಕ್ತದಾನ ಮಾಡುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದ್ದಾರೆ. ಕಲಬುರಗಿಯಲ್ಲಿ ಆಯೋಜಿಸಿದ್ದ ಜಿನೀವಾ ಒಪ್ಪಂದ ದಿನಾಚರಣೆ ಹಾಗೂ ಬೃಹತ್ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚೆಗೆ ರಸ್ತೆ ಅಪಘಾತಗಳು ಹೆಚ್ಚುತ್ತಿರುವ ಹಿನ್ನೆಲೆ, ತುರ್ತು ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿದೆ. ಹೀಗಾಗಿ ಎಲ್ಲೆಡೆ ಬ್ಲಡ್ ಬ್ಯಾಂಕ್‌ಗಳ ಜೊತೆಗೆ ರಕ್ತದಾನ ಶಿಬಿರ ಕಾರ್ಯಕ್ರಮವು ಹೆಚ್ಚಾಗಬೇಕಿದೆ ಎಂದರು.

*******

ಐತಿಹಾಸಿಕ ನಾಡಹಬ್ಬ ದಸರಾ ಮಹೋತ್ಸವಕ್ಕೆ ಅಗತ್ಯವಿರುವ ಹಣವನ್ನು ಬಿಡುಗಡೆ ಮಾಡಲಾಗುವುದು ಮಾತ್ರವಲ್ಲ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ದಸರಾ ಮಹೋತ್ಸವ 2024 ರ ಅದ್ದೂರಿ ಆಚರಣೆಯ ನಿಟ್ಟಿನಲ್ಲಿ ವಿಧಾನಸಭಾ ಸಮ್ಮೇಳನ ಸಭಾಂಗಣದಲ್ಲಿ ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಲೆ, ಸಾಹಿತ್ಯ, ಕ್ರೀಡೆ, ಆಹಾರ, ಕುಸ್ತಿ, ವಸ್ತು ಪ್ರದರ್ಶನ, ದೀಪಾಲಂಕಾರ ಸೇರಿದಂತೆ ಎಲ್ಲವೂ ಆಕರ್ಷಣೀಯ ಹಾಗೂ ಅರ್ಥಪೂರ್ಣವಾಗಿರಲಿ ಎಂದರು.

*******

ಆನೆಗಳ ಸಂವರ್ಧನೆಯ ದೃಷ್ಟಿಯಿಂದ ರಾಜ್ಯದಲ್ಲಿ ಮೈಸೂರು ಹಾಗೂ ದಾಂಡೇಲಿ ರಕ್ಷಿತಾರಣ್ಯಗಳನ್ನು ಮೀಸಲಿಡಲಾಗಿದೆ. ಈ ಅರಣ್ಯ ಪ್ರದೇಶ 10 ಸಾವಿರ ಚದರ ಕಿಲೋ ಮೀಟರ್ ವ್ಯಾಪ್ತಿಯಲ್ಲಿದ್ದು, ಆನೆಗಳ ಸಂವರ್ಧನೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರು ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ವಿಶ್ವ ಆನೆ ದಿನದ ಅಂಗವಾಗಿ ಆಯೋಜಿಸಿದ್ದ 'ಮಾನವ – ಆನೆ ಸಂಘರ್ಷ ನಿರ್ವಹಣೆ' ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ 6 ಸಾವಿರದ 395 ಆನೆಗಳಿದ್ದು, ದೇಶದ ಸುಮಾರು ಶೇಕಡ 25 ರಷ್ಟು ಆನೆ ಸಂತತಿಯನ್ನು ನಮ್ಮ ರಾಜ್ಯ ಹೊಂದಿದೆ ಎಂದರು. ರಾಜ್ಯದಲ್ಲಿ ಆನೆ ಮಾನವ ಸಂಘರ್ಷ ತಡೆ ದೃಷ್ಟಿಯಿಂದ ಒಟ್ಟು 9 ಆನೆ ಕಾರ್ಯಪಡೆಗಳು ಸಕ್ರಿಯವಾಗಿವೆ. ವಾರ್ಷಿಕವಾಗಿ 150 ಕೋಟಿ ರೂಪಾಯಿಗೂ ಹೆಚ್ಚು ಹಣ ವ್ಯಯಿಸಲಾಗುತ್ತಿದೆ. ಅನುದಾನವನ್ನು 800 ಕಿಲೋ ಮೀಟರ್ ವ್ಯಾಪಿಸಿರುವ ಸೌರ ವಿದ್ಯುತ್ ಬೇಲಿಗಳು, ಆನೆ ತಡೆ ಕಂದಕಗಳನ್ನು ನಿರ್ಮಿಸಲು ಬಳಸಲಾಗುತ್ತದೆ ಎಂದು ತಿಳಿಸಿದರು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಮಾನವ – ಆನೆ ಸಂಘರ್ಷದಿಂದ ಅನೇಕ ಸಾವು–ನೋವು ಸಂಭವಿಸುತ್ತವೆ. ಇವುಗಳನ್ನು ತಪ್ಪಿಸಲು ಸರ್ಕಾರ ಶ್ರಮಿಸುತ್ತಿದ್ದು, ಸಾರ್ವಜನಿಕರು ಸಹಕರಿಸಿದಾಗ ಮಾತ್ರ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ ಎಂದು ಹೇಳಿದರು.

*******

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾದೆಮಿಯಲ್ಲಿ ಸದಸ್ಯರ ಸ್ಥಾನಕ್ಕೆ ನೇಮಕಗೊಂಡಿರುವ ಡಾಕ್ಟರ್ ವಿಜಯಲಕ್ಷ್ಮೀ ನಾಯಕ್, ಕರ್ನಾಟಕ ಶಿಲ್ಪಕಲಾ ಅಕಾದೆಮಿಯಲ್ಲಿ ಸದಸ್ಯರ ಸ್ಥಾನಕ್ಕೆ ರಾಮಮೂರ್ತಿ ಮತ್ತು ನಾಗರಾಜ ಶಿಲ್ಪಿ ಹಾಗೂ ಕರ್ನಾಟಕ ಲಲಿತ ಕಲಾ ಅಕಾದೆಮಿಯಲ್ಲಿ ಸದಸ್ಯರ ಸ್ಥಾನಕ್ಕೆ ನೇಮಕಗೊಂಡಿರುವ ಆರ್.ಶಂಕರ್ ಇವರು, ಸದಸ್ಯರಾಗಿ ಮುಂದುವರೆಯಲು ನಿರಾಕರಿಸಿರುವ ಹಿನ್ನೆಲೆ, ಇವರ ನಾಮ ನಿರ್ದೇಶನಗೊಳಿಸಿರುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಸರ್ಕಾರ ಆದೇಶಿಸಿದೆ. ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾದೆಮಿಗೆ ಸದಸ್ಯರಾಗಿ ಅಕ್ಷತಾ ಎಂ.ನಾಯಕ್, ಕರ್ನಾಟಕ ರಾಜ್ಯ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾದೆಮಿಯಲ್ಲಿ ಖಾಲಿ ಇರುವ ಸದಸ್ಯ ಸ್ಥಾನಕ್ಕೆ ವಿನೋದ ಮೂಡಗಡದ್ದೆ, ಕರ್ನಾಟಕ ಶಿಲ್ಪ ಕಲಾ ಅಕಾದೆಮಿ ಸದಸ್ಯರಾಗಿ ರಾಘವೇಂದ್ರ ಕಿನ್ನಾಳ ಹಾಗೂ ಶಿವಪ್ರಸಾದ್, ಕರ್ನಾಟಕ ಲಲಿತ ಕಲಾ ಅಕಾದೆಮಿ ಸದಸ್ಯರಾಗಿ ಎಚ್.ಎಸ್.ಮಂಜುನಾಥ್, ಕರ್ನಾಟಕ ಬಯಲಾಟ ಅಕಾದೆಮಿ ಹೆಚ್ಚುವರಿ ಸದಸ್ಯರಾಗಿ ಲಕ್ಷ್ಮಣ ಹಣಮಂತ ದೇಸಾರಟ್ಟಿ ಅವರನ್ನು ಆಯ್ಕೆ ಮಾಡಲಾಗಿದೆ. ಮೈಸೂರು ರಂಗಾಯಣದ ನಿರ್ದೇಶಕರಾಗಿ ತಿಪಟೂರಿನ ಸತೀಶ್ ಟಿ.ಎಚ್, ಶಿವಮೊಗ್ಗ ರಂಗಾಯಣಕ್ಕೆ ಸಾಗರದ ಪ್ರಸನ್ನ ಡಿ, ಕಲಬುರಗಿ ರಂಗಾಯಣಕ್ಕೆ ಡಾಕ್ಟರ್ ಸುಜಾತ ಜಂಗಮಶೆಟ್ಟಿ, ಕಾರ್ಕಳ ಯಕ್ಷ ರಂಗಾಯಣಕ್ಕೆ ವೆಂಕಟರಮಣ ಐತಾಳ, ದಾವಣಗೆರೆ ವೃತ್ತಿ ರಂಗಭೂಮಿ ರಂಗಾಯಣಕ್ಕೆ ಮಲ್ಲಿಕಾರ್ಜುನ್ ಕಡಕೋಳ ಹಾಗೂ ಧಾರವಾಡ ರಂಗಾಯಣಕ್ಕೆ ಡಾಕ್ಟರ್ ರಾಜು ತಾಳಿಕೋಟೆ ಅವರನ್ನು ಆಯ್ಕೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಇದೇ ತಿಂಗಳ 25 ರಂದು ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶ ಬಾಂಧವರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನದ ಮಾತಿನ ಮಾಸಿಕ ಬಾನುಲಿ ಕಾರ್ಯಕ್ರಮದ 113 ನೇ ಸಂಚಿಕೆಯಾಗಿದೆ. ಮುಂಬರುವ ಮನದ ಮಾತಿಗಾಗಿ ಜನರು ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಟೋಲ್ ಫ್ರೀ ಸಂಖ್ಯೆ 1800–11–7800 ಮೂಲಕ ಸಲ್ಲಿಸಬಹುದು.

ನರೇಂದ್ರ ಮೋದಿ ಆ್ಯಪ್ ಅಥವಾ ಮೈ ಗೌವ್ ಓಪನ್ ಫೋರಮ್ ಮೂಲಕ ಜನರು ತಮ್ಮ ಸಲಹೆಗಳನ್ನು ಆನ್‌ಲೈನ್‌ನಲ್ಲಿ ಹಂಚಿಕೊಳ್ಳಬಹುದು. ಮುಂಬರುವ ಸಂಚಿಕೆಗಾಗಿ ಎಲ್ಲಾ ಸಲಹೆಗಳನ್ನು ಈ ತಿಂಗಳ 23 ರವರೆಗೆ ಸ್ವೀಕರಿಸಲಾಗುತ್ತದೆ.

*******

ಬೀದರ್ ಜಿಲ್ಲೆಯ ಹುಮನಾಬಾದ ತಾಲೂಕಿನ ಮಲ್ಕಾಪುರವಾಡಿಯ ಯುವ ರೈತ ರವಿ ಮಲಕಪ್ಪ, ನವ ದೆಹಲಿಯಲ್ಲಿ ನಡೆಯುವ ಸ್ವಾತಂತ್ರ್ಯೋತ್ಸವದ ವಿಶೇಷ ಆಮಂತ್ರಿತರಾಗಿದ್ದಾರೆ. ಆತ್ಮ ಯೋಜನೆಯಡಿ ಸರ್ಕಾರದಿಂದ ಸಹಾಯಧನ ಪಡೆದು, ಕೃಷಿಯಲ್ಲಿ ಆಧುನಿಕತೆಯೊಂದಿಗೆ ಹೆಚ್ಚು ಇಳುವರಿ ಪಡೆದುಕೊಳ್ಳುತ್ತಿರುವ ಇವರು ಆಕಾಶವಾಣಿಯೊಂದಿಗೆ ತಮ್ಮ ಸಂತಸವನ್ನು ಹಂಚಿಕೊಂಡಿದ್ದಾರೆ.

ಧ್ವನಿ : ರವಿ ಮಲಕಪ್ಪ 39 ಸೆಕೆಂದುಗಳು

ಕೊಪ್ಪಳ ಜಿಲ್ಲೆ ಕುಕನೂರು ತಾಲೂಕು ಮಸಬಹಂಚಿನಾಳ ಗ್ರಾಮದ ವೀಣಾ ಎನ್.ಕಂಬಾರ್, ಡ್ರೋನ್ ತಂತ್ರಜ್ಞಾನವನ್ನು ನಿರ್ವಹಿಸಿ, ಕೃಷಿ ಕ್ಷೇತ್ರದಲ್ಲಿ ಸಕ್ರಿಯರಾಗಿ ತೊಡಗಿಸಿಕೊಂಡಿದ್ದಾರೆ. ನವದೆಹಲಿಯಲ್ಲಿ ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮಕ್ಕೆ ಅತಿಥಿಯಾಗಿ ಆಮಂತ್ರಿತರಾಗಿರುವ ಇವರು ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ವೀಣಾ ಎನ್ ಕಮ್ಮಾರ 47 ಸೆಕೆಂದುಗಳು

*******

ಹಿರಿಯ ಸಾಹಿತಿ, ಶಿಕ್ಷಕ, ಕನ್ನಡ ಚಳವಳಿಗಾರ ಎಂ.ಎಸ್.ಸಿಂಧೂರ ಬಾಗಲಕೋಟೆಯಲ್ಲಿ ನಿನ್ನೆ ವಯೋಸಹಜ ಕಾಯಿಲೆಯಿಂದ ನಿಧನರಾದರು. ಅವರಿಗೆ 94 ವರ್ಷ ವಯಸ್ಸಾಗಿತ್ತು.
ಮೂಲತಃ ಬಾಗಲಕೋಟೆ ಜಿಲ್ಲೆ ಜಮಖಂಡಿಯ ತುಂಗಳ ಗ್ರಾಮದವರಾದ ಸಿಂಧೂರ, ಪ್ರಾಥಮಿಕ ಶಾಲೆ ಶಿಕ್ಷಕರಾಗಿ ಜತ್ತ ತಾಲ್ಲೂಕಿನ ಗಡಿ ಪ್ರದೇಶದಲ್ಲಿ ಗಣನೀಯ ಸೇವೆ ಸಲ್ಲಿಸಿ, ಕನ್ನಡ ಶಾಲೆಗಳ ಉಳಿವಿಗೆ ಗಮನಾರ್ಹ ಸೇವೆ ಸಲ್ಲಿಸಿದ್ದಾರೆ. ಶರಣ ತತ್ವ ಪ್ರಸಾರದಲ್ಲಿ ಅವಿರತವಾಗಿ ದುಡಿದ ಅವರು, 70 ಕ್ಕೂ ಹೆಚ್ಚು ಕನ್ನಡ ಪುಸ್ತಕಗಳನ್ನು ಬರೆದವರು. ಎಂ.ಎಸ್ ಸಿಂಧೂರ ಅವರ ಪಾರ್ಥೀವ ಶರೀರದ ಅಂತ್ಯಕ್ರಿಯೆ ನಿನ್ನೆ ಸಂಜೆ ಸ್ವಗ್ರಾಮ ತುಂಗಳದಲ್ಲಿ ನೆರವೇರಿತು.

*******

ತುಂಗಭದ್ರಾ ಜಲಾಶಯದ 19 ನೇ ಗೇಟ್ ನ ಸರಪಳಿ ಲಿಂಕ್ ತುಂಡಾದ ಹಿನ್ನೆಲೆ, ನೀರನ್ನು ಹೊರಬಿಟ್ಟು ದುರಸ್ತಿ ಮಾಡುವ ಕಾರ್ಯಕ್ಕೆ ನೀರಾವರಿ ಇಲಾಖೆ ಸಜ್ಜಾಗಿದೆ. ಈ ಪ್ರದೇಶಕ್ಕೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಲಿದ್ದು ಪರಿಶೀಲನೆ ನಡೆಸಲಿದ್ದಾರೆ.

*******

ರಾಜ್ಯ ಜಲಸಂಪನ್ಮೂಲ ಇಲಾಖೆ, ರಾಷ್ಟ್ರೀಯ ಜಲಜನಕ ಯೋಜನೆಯಿಂದ ಐ.ಸಿ.ಡಬ್ಲ್ಯು.ಎ.ಆರ್ ಸಹಯೋಗದೊಂದಿಗೆ ಬೆಂಗಳೂರಿನ ಭಾರತೀಯ ವಿಜ್ಞಾನ ಮಂದಿರಲ್ಲಿ ಇಂದು ರಾಷ್ಟ್ರೀಯ ಬಾಹ್ಯಾಕಾಶ ದಿನ ಕುರಿತ ಕಾರ್ಯಾಗಾರ ಆಯೋಜಿಸಲಾಗಿದೆ. ಐಐಎಸ್‌ಸಿ ಯ ಎ.ವಿ.ರಮಣರಾವ್ ಸಭಾಂಗಣದಲ್ಲಿ ಚಂದ್ರಯಾನ–3 ಯಶಸ್ಸಿನ ಹಿನ್ನೆಲೆಯಲ್ಲಿ ಆಯೋಜಿಸಿರುವ ಕಾರ್ಯಾಗಾರಕ್ಕೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ ನೀಡಲಿದ್ದಾರೆ.

*******